ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

ಪತ್ರಿಕಾ ಪ್ರಕಟಣೆ

ದಿನಾಂಕ 03/01/2019.

ಚಿಂತಾಮಣಿ ತಾಲ್ಲೂಕು, ಚೊಕ್ಕರೆಡ್ಡಹಳ್ಳಿ ಗ್ರಾಮದ ನಿವಾಸಿಯೊಬ್ಬರು ಬಡಗವಾರಹಳ್ಳಿ, ಮರಿಮಾಕಲಹಳ್ಳಿ ಗ್ರಾಮದಲ್ಲಿರುವ ಜಮೀನುಗಳನ್ನು ಕೈಗಾರಿಕೆ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ಭೂಪರಿವರ್ತನೆ ಮಾಡಿಸಲು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ಕಛೇರಿಗೆ ಅರ್ಜಿಯನ್ನು ಸಲ್ಲಿಸಿರುತ್ತಾರೆ. 1) ಶ್ರೀ. ವಸಂತ್‌ಕುಮಾರ್, ಗ್ರಾಮ ಲೆಕ್ಕಿಗ, ಕಾಗತಿ ಕಂದಾಯ ವೃತ್ತ ಹಾಗೂ 2) ಶ್ರೀ. ರವಿ ಕಲ್ಲೂರು, ರೆವಿನ್ಯೂ ಇನ್ಸ್‌ಪೆಕ್ಟರ್, ಕಸಬಾ ಹೊಬಳಿ, ಚಿಂತಾಮಣಿ ತಾಲ್ಲೂಕು ರವರು ಸ್ಥಳ ಪರಿಶೀಲನೆ ಮಾಡಿ, ನಿರಾಕ್ಷೇಪಣ ಪತ್ರವನ್ನು ನೀಡಲು ರೂ.30,000/– ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:02/01/2019 ರಂದು ದೂರುದಾರರಿಂದ ಶ್ರೀ.ವಸಂತ್‌ಕುಮಾರ್ ರವರು ರೂ.23,000/– ಲಂಚದ ಹಣವನ್ನು ಸ್ವೀಕರಿಸುತ್ತಿರುವಾಗ ಚಿಕ್ಕಬಳ್ಳಾಪುರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಆರೋಪಿಯನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.